## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹೆಚ್.ಜಿ.ಕೇಶವಮೂರ್ತಿ, ಹಿಂದಿನ ಕಾರ್ಯದರ್ಶಿ, ಇಲವಾಳ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/710/ಗ್ರಾಪಂಕಾ/2012 ದಿನಾಂಕ: 29-12-2012
2. ಅಪರ ನಿಭಂಧಕರು ವಿಚಾರಣೆಗಳು-8 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/ENQ/4/2013, Dt:05-04-2017
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/ENQ/4/2013, Dt:06-04-2017
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: LOK/INQ/14-A/ENQ/4/2013, Dt:10-04-2017
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/317/ಗ್ರಾಪಂಕಾ/2017 ದಿನಾಂಕ: 05-05-2017.
6. ಶ್ರೀ ಹೆಚ್.ಜಿ.ಕೇಶವಮೂರ್ತಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ: 27-05-2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಹೆಚ್.ಜಿ.ಕೇಶವಮೂರ್ತಿ, ಹಿಂದಿನ ಕಾರ್ಯದರ್ಶಿ, ಇಲವಾಳ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"ನೀವು ಶ್ರೀ ಹೆಚ್.ಜಿ.ಕೇಶವಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಬೇಡಿಕೆ ರಿಜಿಸ್ಟರ್‌ಅನ್ನು ಕಾನೂನು ಬಾಹಿರಾವಾಗಿ ತಿದ್ದುಪಡಿ ಮಾಡಿ ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ದುರ್ನಡತೆ ಎಸಗಿರುತ್ತೀರಿ ಎಂದು ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ತಮ್ಮ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಹೆಚ್.ಜಿ.ಕೇಶವಮೂರ್ತಿ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಶಾಶ್ವತವಾಗಿ ತಡೆಹಿಡಿಯುವಂತೆ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ

ಈ ಸಂಬಂಧ ಶ್ರೀ ಹೆಚ್.ಜಿ.ಕೇಶವಮೂರ್ತಿ, ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ದಿನಾಂಕ: 27.05.2017ರ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ

ತಮ್ಮ ಲಿಖಿತ ಹೇಳಿಕೆಯಲ್ಲಿ ವಿಚಾರಣಾಧಿಕಾರಿಗಳು ಮಾಡಿರುವ ಆರೋಪಗಳನ್ನು ಅಲ್ಲಗಳೆದಿರುತ್ತಾರೆ ಹಾಗೂ ತಾವು ಗ್ರಾಮ ಪಂಚಾಯತಿ ಸಭೆಯ ನಿರ್ಣಯದಂತೆ ಕ್ರಮವಹಿಸಿರುವುದಾಗಿ ತಿಳಿಸಿರುತ್ತಾರೆ ಹಾಗೂ ಈ ಅಂಶಗಳ ಹಿನ್ನೆಲೆಯಲ್ಲಿ ವಿಚಾರಣಾ ವರದಿಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ತಿರಸ್ಕರಿಸುವಂತೆ ಆಪಾದಿತರು ಕೋರಿರುತ್ತಾರೆ.

ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯವನ್ನು ವರದಿಯಲ್ಲಿ ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

Disciplinary Authority has proved that DGO while working as Gram Panchayath Secretary, Ilavala Gram Panchayathi, Mysore Taluk has tampered the records of site of daughter of complainant by name Pooja purchased site of 40 x 45 and DGO has made additions to the extent of 40x20 without any resolutions of gram panchayath and without any availability of land therein at the spot and without taking approved plan and map from the gram panchayat, he has made additions to the extent of 40x20 in the Ilavala Gram Panchayath records and by tampering such records committed illegally, injustice to the purchaser i.e. complainant's daughter Pooja in getting her own site 40x45 without any integrity and thereby failed to maintain absolute devotion of duty and acted in a manner unbecoming of a public/Government servant and thereby committed misconduct u/s 3(1)(i) and (iii) of KCS (Conduct) Rules, 1966 and made himself liable for disciplinary action

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿರುತ್ತಾರೆ ಮತ್ತು ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ಹೆಚ್.ಜಿ.ಕೇಶವಮೂರ್ತಿ, ರವರಿಗೆ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಶಾಶ್ವತವಾಗಿ ತಡೆಹಿಡಿಯುವಂತೆ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ ಎಲ್ಲಾ ಅಂಶಗಳನ್ನು ಹಿನ್ನೆಲೆಯಲ್ಲಿ ಶ್ರೀ ಹೆಚ್.ಜಿ.ಕೇಶವಮೂರ್ತಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ನಿರ್ಣಯಿಸಿದೆ. ಆದುದರಿಂದ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಶಾಶ್ವತವಾಗಿ ತಡೆಹಿಡಿಯುವಂತೆ"** ದಂಡನೆ ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 317 ಗ್ರಾಪಂಕಾ 2017 ಬೆಂಗಳೂರು, ದಿನಾಂಕ-23-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಹೆಚ್.ಜಿ.ಕೇಶವಮೂರ್ತಿ, ಹಿಂದಿನ ಕಾರ್ಯದರ್ಶಿ, ಇಲವಾಳ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರು ಬೇಡಿಕೆ ರಿಜಿಸ್ಟರ್‌ಅನ್ನು ಕಾನೂನು ಬಾಹಿರಾವಾಗಿ ತಿದ್ದುಪಡಿ ಮಾಡಿ ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ ಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಶಾಶ್ವತವಾಗಿ ತಡೆಹಿಡಿಯುವಂತೆ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ
6. ಶ್ರೀ ಹೆಚ್.ಜಿ.ಕೇಶವಮೂರ್ತಿ, ಹಿಂದಿನ ಕಾರ್ಯದರ್ಶಿ, ಇಲವಾಳ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.